# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ಬನಹಟ್ಟಿ

**ಸಿ.ಸಿ.ನಂ.1431/2023**

1) ವಿಶ್ವನಾಥ ದುಂಡಪ್ಪ ಕೊಣ್ಣೂರ,
ಸಾಃ ಬನಹಟ್ಟಿ.

.....ಫಿರ್ಯಾದಿದಾರ

– ವಿರುದ್ಧ –

1) ರಹಿಮಾನ್ ಸಿರಾಜ್‌ಸಾಬ ಹಿಪ್ಪರಗಿ,
ಸಾಃ ರಬಕವಿ.

......ಆರೋಪಿ

## – ಆಪಾದನೆ –

ನಾನು ಶ್ರೀಮತಿ.ಶುಷ್ಮ ಟಿ.ಸಿ., ಬಿ.ಕಾಂ., ಎಲ್.ಎಲ್.ಬಿ., ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ. ದಂಡಾಧಿಕಾರಿಗಳು, ಬನಹಟ್ಟಿ , ತಾ:ರಬಕವಿ-ಬನಹಟ್ಟಿ ಹೊರೆಸುವ ಆಪಾದನೆ ಏನೆಂದರೆ,

ಆರೋಪಿಯಾದ ನೀವು ಫಿರ್ಯಾದಿದಾರರಿಗೆ ಕಾನೂನುಬದ್ಧವಾಗಿ ಕೊಡಬೇಕಾಗಿದ್ದ ರೂ.3,00,000/- ಗಳ ಪಾವತಿಗಾಗಿ ನಿಮ್ಮ ಖಾತೆ ಇರುವ State Bank of India Branch, ರಬಕವಿ ಬ್ಯಾಂಕಿನ ಚೆಕ್ ನಂ.429762 ನ್ನು ದಿನಾಂಕ 13-06-2023 ರ ದಿನಾಂಕ ನಮೂದಿಸಿ ರೂ.3,00,000/-ಗಳಿಗೆ ಫಿರ್ಯಾದಿದಾರರಿಗೆ ನೀಡಿದ್ದು, ಅವರು ಸದರಿ ಚೆಕ್ಕನ್ನು ತಮ್ಮ ಬ್ಯಾಂಕಿನ ಮೂಲಕ ನಗದೀಕರಿಸಲು ಹಾಕಿದಾಗ ನಿಮ್ಮ ಬ್ಯಾಂಕಿನವರು“**insufficient Funds”** ಎನ್ನುವ ಹಿಂಬರಹದೊಂದಿಗೆ ದಿನಾಂಕ 14-06-2023 ರಂದು ಸದರಿ ಚೆಕ್ಕು ನಗದೀಕರಣವಾಗದೇ ವಾಪಸ್ಸು ಬಂದಿದ್ದು, ಆ ಬಗ್ಗೆ ಫಿರ್ಯಾದಿದಾರರು ತಮ್ಮ ವಕೀಲರ ಮೂಲಕ ನಿಮಗೆ ದಿನಾಂಕ 23-06-2023 ರಂದು ಲೀಗಲ್ ನೋಟೀಸನ್ನು ನೀಡಿದ್ದು, ಸದರಿ ನೋಟೀಸ್ ನೀವು ದಿನಾಂಕ 27-06-2023 ರಂದು ಸ್ವೀಕರಿಸಿದ್ದು, ನಂತರ 15 ದಿನಗಳು ಕಳೆದರೂ ಸಹ ನೀವು ಚೆಕ್ಕಿನಲ್ಲಿ ನಮೂದಿಸಿದ ಹಣ ಪಾವತಿಸದೇ ಲಿಖಿತ ವರ್ಗಾವಣೆಗಳ ಕಾಯ್ದೆ (N.I.Act) ಕಲಂ.138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುವಿ ಅಂತಾ ಆಪಾದಿಸಲಾಗಿದೆ.

ಪ್ರಶ್ನೆ-1) ಈಗ ಓದಿ ಹೇಳಲಾದ ಆರೋಪಣೆ ತಿಳಿಯಿತೆ ?
ಉತ್ತರಃ-

ಪ್ರಶ್ನೆ-2) ಸದರಿ ಆರೋಪಣೆಯನ್ನು ಒಪ್ಪಿ ಕೊಳ್ಳುವಿರೋ ಅಥವಾ ವಿಚಾರಣೆ ಆಗಲು ಬಯಸುವಿರೊ?
ಉತ್ತರಃ-

ಮೇಲೆ ಹೇಳಲಾದ ಆರೋಪಣೆಯನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ ಹೇಳಿದ ನಂತರ ಅವರು ನೀಡಿದ ಉತ್ತರವನ್ನು ಅವರ ಭಾಷೆಯಲ್ಲಿ ಬರೆದುಕೊಳ್ಳಲಾಯಿತು ಎಂದು ದೃಢೀಕರಿಸಲಾಗಿದೆ.

ಸ್ಥಳ ಃ ಬನಹಟ್ಟಿ
ದಿನಾಂಕ ಃ 28-02-2024

ಪ್ರ.ದ.ನ್ಯಾ. ದಂಡಾಧಿಕಾರಿಗಳು,
ಬನಹಟ್ಟಿ.

ಆರೋಪಿಯ ಸಹಿಃ